ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ರಾಜ್ಯ ಸರ್ಕಾರ & ಸರ್ಕಾರೇತರರು ನಡೆಸುವ ಮಕ್ಕಳ ನಿಲಯಗಳ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

640 (912) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸರ್ಕಾರ ಮತ್ತು ಸರ್ಕಾರೇತರರು ನಡೆಸುವ ಮಕ್ಕಳ ನಿಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಮಕ್ಕಳ ನಿಲಯಗಳಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದ ಸೋಂಕು ಉಂಟಾಗದಂತೆ ತಡೆಯಲು ಇಲ್ಲಿಯವರೆಗೆ ಸರ್ಕಾರ ಯಾವ ಯಾವ ಕ್ರಮಗಳನ್ನು ತೆಗೆದುಕೊಂಡಿದೆ ;

(ಇ) ಇಂತಹ ನಿಲಯಗಳಲ್ಲಿ ಎಷ್ಟು ಮಕ್ಕಳಿಗೆ ಸೋಂಕು ಉಂಟಾಗಿರುವುದು ಪತ್ತೆಯಾಗಿದೆ ; ಎಷ್ಟು ಮಕ್ಕಳು ಸೋಂಕಿನ ಕಾರಣದಿಂದ ನಿಧನರಾಗಿದ್ದಾರೆ ;

(ಈ) ಎಷ್ಟು ನಿಲಯಗಳನ್ನು ಈ ಹಿನ್ನೆಲೆಯಲ್ಲಿ ಮುಚ್ಚಲಾಗಿದೆ ; ಮುಚ್ಚಲಾದ ವಸತಿ ನಿಲಯಗಳಲ್ಲಿ ಉಳಿದಿರುವ ಮಕ್ಕಳಿಗೆ ಯಾವ ರೀತಿಯ ಪರ್ಯಾಯ ವ್ಯವಸ್ಥೆ ಮಾಡಲಾಗಿದೆ ;

(ಉ) ಕೋವಿಡ್-19 ಕಾರಣಕ್ಕಾಗಿ ಎಷ್ಟು ಮಕ್ಕಳು ಅನಾಥರಾಗಿದ್ದಾರೆ; ಮತ್ತು ಅವರಿಗಾಗಿ ಯಾವ ರೀತಿಯ ವ್ಯವಸ್ಥೆ ಮಾಡಲಾಗಿದೆ?